ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

**ಸಿ.ಸಿ. 544/2019**

ಸಿ.ಡಬ್ಲ್ಯೂ -4, ಪಿ.ಡಬ್ಲ್ಯೂ -4

ದಿಃ **21.08.2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ಪುಟ್ಟೇಗೌಡ |
| ತಂದೆ/ಗಂಡನ ಹೆಸರು | ಪಾಪೇಗೌಡ |
| ವಯಸ್ಸು | ಸುಮಾರು 70 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಮೂಡಲಕೊಪ್ಪಲು ಗ್ರಾಮ |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:**

ಚಾಸಾ-**1** ಗೊತ್ತು. ಆರೋಪಿತರು ಗೊತ್ತು. ಚಾಸಾ-**1** ಹಾಗೂ ಆರೋಪಿತರ ನಡುವೆಯಾದ ಗಲಾಟೆಯ ಬಗ್ಗೆ ಗೊತ್ತಿಲ್ಲ. ಪ್ರತ್ಯೇಕ್ಷವಾಗಿ ನಾನು ಘಟನೆಯನ್ನು ನೋಡಿರುವುದಿಲ್ಲ. ನಾನು ಪೊಲೀಸರ ಸಮಕ್ಷಮ ಯಾವುದೇ ಹೇಳಿಕೆ ನೀಡಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಮು.ಮಾ-**1** ಮತ್ತು **2** ನ್ನು ಇಂದೇ ಮೊದಲ ಬಾರಿಗೆ ನೋಡುತ್ತಿದ್ದೇನೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ ವಕೀಲರಿಂದಃ**

ದಿಃ **20.01.2016** ರಂದು ಬೆಳಿಗ್ಗೆ **11.00** ಗಂಟೆ ಸಮಯದಲ್ಲಿ ನಾನು ನಮ್ಮ ಮನೆಯ ಬಳಿ ಇರುವಾಗ ಚಾಸಾ-**1** ರವರ ಕೂಗಾಡುವ ಶಬ್ದ ಕೇಳಿ ಸ್ಥಳಕ್ಕೆ ಹೋಗಿ ನೋಡಲಾಗಿ, ಆರೋಪಿತರು ಇದು ನಮ್ಮ ಜಾಗ ಯಾಕೆ ಹುಲ್ಲು ಹಾಕಿದ್ದೀರಿ ಎಂದು ಬೈಯುತ್ತಾ, ಅಲ್ಲೇ ಬಿದ್ದಿದ್ದ ದೊಣ್ಣೆಯನ್ನು **1** ನೇ ಆರೋಪಿ ತೆಗೆದುಕೊಂಡು ಏಕಾಏಕಿ ಚಾಸಾ-**1** ರವರ ತಲೆಗೆ ಹೊಡೆದನು ಎಂದರೆ ಸರಿಯಲ್ಲ. **2** ನೇ ಆರೋಪಿ ಅಲ್ಲೇ ಬಿದ್ದಿದ್ದ ಮತ್ತೊಂದು ದೊಣ್ಣೆಯಿಂದ ಚಾಸಾ-**1** ರವರ ಬೆನ್ನಿಗೆ ಮತ್ತು ಎಡಗೈ ಹಾಗೂ ಕಾಲುಗಳಿಗೆ ಹೊಡೆದರು ಎಂದರೆ ಸರಿಯಲ್ಲ. **3** ನೇ ಆರೋಪಿ ಚಾಸಾ-**1** ರವರಿಗೆ ತನ್ನ ಕಾಲಿನಿಂದ ಹೊಟ್ಟೆಗೆ ಒದ್ದು, ಕೈಯಿಂದ ಮೈಕೈಗೆ

ಹೊಡೆದರು ಎಂದರೆ ಸರಿಯಲ್ಲ. ಚಾಸಾ-1 ರವರ ತಲೆಯಿಂದ ರಕ್ತ ಬಂದು ಕೆಳಗೆ ಕುಸಿದು ಬಿದ್ದರು ಎಂದರೆ ಸರಿಯಲ್ಲ. ಚಾಸಾ-1 ರವರ ಬಟ್ಟೆಗೆ ಯಾವುದೇ ರಕ್ತವಾಗಿರುವುದಿಲ್ಲ ಎಂದರೆ ನನಗೆ ಗೊತ್ತಿಲ್ಲ. ನಾನು, ಚಾಸಾ-2 ಮತ್ತು ಚಾಸಾ-3 ರವರು ಜಗಳ ಬಿಡಿಸಿ ಸಮಾಧಾನ ಪಡಿಸಿರುತ್ತೇವೆ ಎಂದರೆ ಸರಿಯಲ್ಲ. ಚಾಸಾ-2 ರವರು ಚಾಸಾ-1 ರವರನ್ನು ಸುದಾರಿಸಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ಪೊಲೀಸರು ಸಮಕ್ಷಮ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಹೇಳಿಕೆಯ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು.

ಈ ಎಲ್ಲ ವಿಚಾರಗಳು ಗೊತ್ತಿದ್ದರೂ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲು ಆರೋಪಿತರ ಪರ ವಿ.ವಿ. ವಕೀಲರಿಂದಃ**

ಪಾಟೀಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.